ಉ) ರೈತರಿಗೆ ಆಗಿರುವ ತೊಂದರೆಯನ್ನು ನಿವಾರಣೆ ಮಾಡಲು ಬೇಕಾದ ಸಮಯವೆಷ್ಟು

ಶ್ರೀ ಬಸವರಾಜ್ ಪಾಟೀಲ್ (ಇಂಧನ ರಾಜ್ಯ ಸಚಿವರು)

ಅ) ಹೌದು

ಆ) ಈ ಕಾಮಗಾರಿಯನ್ನು ಟರ್ನ್ ಕೀ ಆಧಾರದ ಮೇಲೆ ಗುತ್ತಿಗೆದಾರರಿಗೆ (ದೀಪಕ್ ಕೇಬಲ್ಸ್ ಬೆಂಗಳೂರು) ವಹಿಸಿಕೊಡಲಾಗಿದೆ ಸದ್ಯದಲ್ಲಿಯೇ ಈ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು

ಇ) ನಿಜ

ಈ) ಸದರಿ ಕಾಮಗಾರಿಯನ್ನು ಕೂಡಲೇ ಪ್ರಾರಂಭಿಸಲು ಗುತ್ತಿಗೆದಾರರಿಗೆ ಈಗಾಗಲೇ ಸೂಚನೆ ನೀಡಲಾಗಿದೆ

ಉ) ಕಾಮಗಾರಿಯು ಪ್ರಾರಂಭಗೊಂಡ ನಂತರ ಸುಮಾರು 3 ತಿಂಗಳುಗಳಲ್ಲಿ ಪೂರ್ಣಗೊಳ್ಳುವ ಸಾಧ್ಯತೆ ಇದೆ

ಗುಂಡ್ಲುಪೇಟೆ ಕ್ಷೇತ್ರದ ಗೋಪಾಲಪುರ ಗ್ರಾಮದ ಬಳಿ ಕೆರೆ ನಿರ್ಮಾಣ ಕಾರ್ಯ ಮಾಡುವ ಬಗ್ಗೆ

51 (01) ಶ್ರೀ ಮಹಾದೇವ ಪ್ರಸಾದ್ ಹೆಚ್ ಎಸ್ (ಗುಂಡ್ಲುಪೇಟೆ) ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗುಂಡ್ಲುಪೇಟೆ ತಾಲ್ಲೂಕು ಗೋಪಾಲಪುರ ಗ್ರಾಮದ ಬಳಿ ಕೆರೆ ನಿರ್ಮಿಸಲು ಕ್ರಮ ಕೈಗೊಳ್ಳಲಾಗಿದೆಯೇ ಹಾಗಿದ್ದರೆ ಯಾವ ಸಾಲಿನಲ್ಲಿ ಕೆಲಸ ಪ್ರಾರಂಭಿಸಲಾಯಿತು

ಆ) ನಿರ್ಮಾಣ ಕಾರ್ಯ ವಿಳಂಬವಾಗಲು ಕಾರಣವೇನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗಿದೆಯೇ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ ಸಚಿವರು)

ಅ) ಗುಂಡ್ಲುಪೇಟೆ ತಾಲ್ಲೂಕು ಗೋಪಾಲಪುರ ಗ್ರಾಮದ ಬಳಿ ಕೆರೆ ನಿರ್ಮಿಸಲು ಕ್ರಮ ಕೈಗೊಳ್ಳಲಾಗಿದೆ 1999–2000ನೇ ಸಾಲಿನಲ್ಲಿ ಕೆಲಸ ಪ್ರಾರಂಭಿಸಲಾಯಿತು

ಆ) ಸದರಿ ಕಾಮಗಾರಿಯನ್ನು ಕರ್ನಾಟಕ ರಾಜ್ಯ ನಿರ್ಮಾಣ ನಿಗಮಕ್ಕೆ 01 07 1999ರಂದು ವಹಿಸಿಕೊಡಲಾಗಿತ್ತು ನಿಗಮದ ವತಿಯಿಂದ 16 00 ಲಕ್ಷ ರೂ ಗಳ ಆರ್ಥಿಕ ಪ್ರಗತಿ ಸಾಧಿಸಲಾಗಿದೆ ಕರ್ನಾಟಕ ರಾಜ್ಯ ನಿರ್ಮಾಣ ನಿಗಮವನ್ನು ಮುಚ್ಚಲು ತೀರ್ಮಾನ ಕೈಗೊಂಡಿರುವ ಹಿನ್ನೆಲೆಯಲ್ಲಿ ಕಾಮಗಾರಿಯನ್ನು ಹಿಂದಕ್ಕೆ ಪಡೆದು ಉಳಿಕೆ ಕೆಲಸಗಳಿಗೆ ಟೆಂಡರ್ ಕರೆಯಲಾಗಿದ್ದು, ಟೆಂಡರ್ ಸ್ವೀಕೃತಿಯಾಗಿರುತ್ತದೆ 2003–04ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 1702 ರಡಿಯಲ್ಲಿ ಅನುದಾನ ಲಭ್ಯತೆ ಇಲ್ಲದೆ ಇರುವ ಕಾರಣ ಟೆಂಡರ್‌ಗೆ ಅನುಮೋದನೆ ನೀಡಲು ಸಾಧ್ಯವಾಗಿರುವುದಿಲ್ಲ ಆದ್ದರಿಂದ ಕಾಮಗಾರಿಯು ವಿಳಂಬವಾಗಿರುತ್ತದೆ ಅನುದಾನ ಲಭ್ಯವಾದಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು

ಮಲೆನಾಡು ಅಭಿವೃದ್ಧಿ ನಿಗಮದ ಕಾಮಗಾರಿಯ ಬಗ್ಗೆ

52 (02) ಶ್ರೀ ಮಹಾದೇವ್ ಪ್ರಸಾದ್ ಹೆಚ್ ಎಸ್ (ಗುಂಡ್ಲುಪೇಟೆ) ಮಾನ್ಯ ಕಾನೂನು ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮಲೆನಾಡು ಅಭಿವೃದ್ಧಿ ನಿಗಮದಿಂದ ಇದುವರೆಗೆ ಪಾವತಿಸಬೇಕಾದ ಬಾಕಿ ಹಣವೆಷ್ಟು ಜಿಲ್ಲಾವಾರು ವಿವರ ನೀಡುವುದು

ಆ) ಬಾಕಿ ಹಣ ಪಾವತಿಸಲು ಕ್ರಮ ಕೈಗೊಳ್ಳಲಾಗಿದೆಯೇ ಪ್ರಸಕ್ತ ಸಾಲಿನಲ್ಲಿ ಹೊಸ ಕಾಮಗಾರಿ ಕೈಗೊಳ್ಳಲು ಸೂಚಿಸಲಾಗಿದೆಯೇ?

ಶ್ರೀ ಡಿ ಬಿ ಚಂದ್ರೇಗೌಡ (ಕಾನೂನು ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಸಚಿವರು)

ಅ) 31 12 2003 ರ ವರೆಗೆ ಪಾವತಿಸಬೇಕಾದ ಮೊತ್ತ (ಲಕ್ಷ ರೂಗಳು)

ಜಿಲ್ಲೆ	ಮೊತ್ತ
ಶಿವಮೊಗ್ಗ	85 00
ದಾವಣಗೆರೆ	54 55
ಹಾವೇರಿ	92 00
ಧಾರವಾಡ	38 00
ಬೆಳಗಾಂ	77 00
ಉತ್ತರ ಕನ್ನಡ	94 00
ದಕ್ಷಿಣ ಕನ್ನಡ	147 00
ಉಡುಪಿ	60 00
ಹಾಸನ	68 86
ಚಿಕ್ಕಮಗಳೂರು	56 58
ಮೈಸೂರು	63 00
ಚಾಮರಾಜನಗರ	51 00
ಕೊಡಗು	46 00
ಮಂಡಳಿಯಿಂದ ಪಾವತಿಸ ಬೇಕಾದ ಹಣ	399 04
ಒಟ್ಟು	1262 03

ಆ) ಕ್ರಮ ಕೈಗೊಳ್ಳಲಾಗುತ್ತದೆ

ಪ್ರಸಕ್ತ ಸಾಲಿನಲ್ಲಿ ಹೊಸ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಯೋಚಿಸಿರುವುದಿಲ್ಲ

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅಡಿಯಲ್ಲಿ ನಿವೇಶನಗಳ ಹಂಚಿಕೆಯ ಬಗ್ಗೆ

53 (3) ಶ್ರೀ ಮಹದೇವ ಪ್ರಸಾದ್ ಹೆಚ್ ಎಸ್ (ಗುಂಡ್ಲುಪೇಟೆ) ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ 'ಜಿ' (G) ಪ್ರವರ್ಗದ ಅಡಿಯಲ್ಲಿ ಎಷ್ಟು ನಿವೇಶನಗಳನ್ನು ಹಂಚಲಾಗಿದೆ

ಆ) ಹಂಚಿಕೆ ಮಾಡಿರುವವರುಗಳ ಹೆಸರು ಮತ್ತು ನಿವೇಶನಗಳ ಅಳತೆ ನೀಡುವುದು

ಶ್ರೀ ಡಿ ಕೆ ಶಿವಕುಮಾರ್ (ನಗರಾಭಿವೃದ್ಧಿ ಸಚಿವರು)

ಅ) ಈವರೆಗೆ ಒಟ್ಟು 111 ನಿವೇಶನಗಳನ್ನು 'ಜಿ' (G) ಪ್ರವರ್ಗದಲ್ಲಿ ಹಂಚಿಕೆ ಮಾಡಲಾಗಿದೆ

ಆ) ಪಟ್ಟಿ ದೊಡ್ಡದಿರುವುದರಿಂದ ವಿವರಗಳನ್ನು ಮಾನ್ಯ ಸದಸ್ಯರಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿದೆ